ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು

1025 ಶ್ರೀ ವಿಶ್ವನಾಥ್ ಎಸ್.ಆರ್ ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2009–10ನೇ ಸಾಲಿನಲ್ಲಿ ಮಂಜೂರಾಗಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು;

ಆ) ಯಲಹಂಕ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು):

ಅ) ಯಾವುದೇ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲಾಗಿಲ್ಲ.

ಆ) ಒಂದು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಹೆಣ್ಣು ಮಕ್ಕಳಿಗಾಗಿ ಮಂಜೂರು ಮಾಡಲಾಗಿದ್ದು, ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಲಭ್ಯವಿಲ್ಲದ ಕಾರಣ ಸದರಿ ಶಾಲೆಯನ್ನು ಪ್ರಾರಂಭಿಸಲಾಗಿಲ್ಲ.

ಶ್ರೀ ಎಸ್.ಆರ್ ವಿಶ್ವನಾಥ್: ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಒದಗಿಸಿದ್ದಾರೆ. ಯಾವುದೇ ಮೊರಾರ್ಜಿ ವಸತಿ ಶಾಲೆಯನ್ನು ಮಂಜೂರು ಮಾಡಿಲ್ಲವೆಂದು ಉತ್ತರಿಸಿದ್ದಾರೆ. ಒಂದು ಅಲ್ಪಸಂಖ್ಯಾತರ ಹೆಣ್ಣು ಮಕ್ಕಳ ವಸತಿ ಶಾಲೆಯನ್ನು ಮಂಜೂರು ಮಾಡಿದ್ದೆವು. ಆದರೆ ಅಲ್ಲಿಗೆ ಅಲ್ಪಸಂಖ್ಯಾತರು ಯಾರೂ ಬರದೇ ಇರುವುದರಿಂದ ಆ ಶಾಲೆಯನ್ನು ತೆಗೆಯುವುದಕ್ಕೆ ಆಗಲಿಲ್ಲವೆಂದಿದ್ದಾರೆ. ಇಡೀ ಯಲಹಂಕ ಕ್ಷೇತ್ರದಲ್ಲಿ ಯಾವುದೇ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಾಡಿಲ್ಲ. ಅಲ್ಲಿ ಬಹಳಷ್ಟು ಜನಸಂಖ್ಯೆ ಇರುವುದರಿಂದ ಈಗೇನು ಅಲ್ಪಸಂಖ್ಯಾತ ಹೆಣ್ಣು ಮಕ್ಕಳ ವಸತಿ ಶಾಲೆಯನ್ನು ಮಾಡುವುದಕ್ಕೆ ಆಗಲಿಲ್ಲವೋ ಅದನ್ನು ಬದಲಾವಣೆ ಮಾಡಿಕೊಡಬೇಕು ಮತ್ತು ಇವತ್ತು ಹೊಸದಾಗಿ ಮಾಡಬೇಕೆಂದರೆ ಬೆಂಗಳೂರು ನಗರ ಜಿಲ್ಲೆಯಲ್ಲಿ ಯಾವುದೇ ರೀತಿಯಾದ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಾಡಬಾರದು ಎಂದು ಕಾನೂನು ಇದೆ ಎಂದು ತಿಳಿದುಬಂದಿದೆ. ಇದಕ್ಕೆ ಮಾನ್ಯ ಸಚಿವರು ಸ್ಪಷ್ಟೀಕರಣವನ್ನು ಕೊಡಬೇಕು.

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೇ, ಯಲಹಂಕದಲ್ಲಿ 2006–07ರಲ್ಲಿ ಒಂದು ಅಲ್ಪಸಂಖ್ಯಾತರ ಮೊರಾರ್ಜಿ ಶಾಲೆಯನ್ನು ಮಂಜೂರು ಮಾಡಿತ್ತು. ಆದರೆ ಅಲ್ಲಿ ಅಗತ್ಯ ಸಂಖ್ಯಾಬಲ ಇಲ್ಲವೆಂದು ಆ ವಸತಿ ಶಾಲೆಯನ್ನು ಪ್ರಾರಂಭ ಮಾಡಲಿಲ್ಲ. ಮಾನ್ಯ ಸದಸ್ಯರು

ಅದನ್ನು ಬದಲಾವಣೆ ಮಾಡಿಕೊಡಬೇಕೆಂದು ಕೇಳಿದ್ದಾರೆ. ಅದನ್ನು ಪರಿಶೀಲನೆ ಮಾಡಿ ಈ ವರ್ಷದಲ್ಲಿಯೇ ಮಾಡಿಕೊಡುತ್ತೇನೆಂದು ಹೇಳುತ್ತೇನೆ. ಈ ಮೊರಾರ್ಜಿ ವಸತಿ ಶಾಲೆಯ concept ಏನಿದೆ ಎಂದರೆ ಗ್ರಾಮೀಣ ಭಾಗದಲ್ಲಿ ಅದನ್ನು ಹೆಚ್ಚಿಗೆ ತೆರೆಯಬೇಕೆಂದು ಇದೆ. ನಗರ ಪ್ರದೇಶದಲ್ಲಿಯೂ ಸಹ ಅವಶ್ಯಕತೆ ಇದ್ದಲ್ಲಿ ಪರಿಶೀಲನೆ ಮಾಡಿ ಮಾಡಿಕೊಳ್ಳುವುದಕ್ಕೂ ಕ್ರಮ ತೆಗೆದುಕೊಳ್ಳುತ್ತೇನೆ.

ಅಧ್ಯಕ್ಷರು: ಮಾನ್ಯ ರಘುಪತಿ ಭಟ್‌ರವರು ಈಗ ಸದನದಲ್ಲಿ ಹಾಜರಿಲ್ಲ. ಈಗ ದಿನಕರಶೆಟ್ಟಿಯವರ ಪ್ರಶ್ನೆ ಇದೆ. ಅವರ ಪರವಾಗಿ ಪ್ರಶ್ನೆ ಕೇಳಲು ಶ್ರೀ ಸುನಿಲ್ ವಿ. ಹೆಗಡೆ ರವರು ನನ್ನ ಅನುಮತಿಯನ್ನು ಪಡೆದಿದ್ದಾರೆ. ಈಗ ಪ್ರಶ್ನೆ ಕೇಳಿ.

ಕುಮಟ ಮತ್ತು ಹೊನ್ನಾವರ ತಾಲ್ಲೂಕುಗಳ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸುವ ಕುರಿತು

566 ಶ್ರೀ ದಿನಕರ ಕೇಶವಶೆಟ್ಟಿ (ಕುಮುಟ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮುಟಾ ಮತ್ತು ಹೊನ್ನಾವರ ತಾಲ್ಲೂಕಿನ ಸರ್ಕಾರಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು;

ಇ) ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಿದಲ್ಲಿ ಈಗಿರುವ ವಸತಿ ನಿಲಯಗಳಲ್ಲಿ ಸ್ಥಳಾವಕಾಶದ ಕೊರತೆಯುಂಟಾಗುವುದಿಲ್ಲವೇ;

ಈ) ಹಾಗಿದ್ದಲ್ಲಿ, ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದಲ್ಲಿ, ಹೆಚ್ಚುವರಿ ಕೊಠಡಿಗಳನ್ನು ಯಾವಾಗ ನಿರ್ಮಿಸಲಾಗುವುದು ಮತ್ತು ಇದಕ್ಕೆ ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು; ವಿವರಗಳನ್ನು ನೀಡುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.

ಆ) ಮೆಟ್ರಿಕ್ ನಂತರದ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಈಗಿರುವ ಸಂಖ್ಯೆಯನ್ನು 50%ಗೆ ಹೆಚ್ಚಿಸಲಾಗುವುದು.